# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 660 ಗ್ರಾಪಂಅ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:17-11-2020.

## ಅಧಿಸೂಚನೆ

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 (1993ರ ಕರ್ನಾಟಕ ಅಧಿನಿಯಮ ಸಂಖ್ಯೆ 14) ರ ಪ್ರಕರಣ 58, 61-ಎ ರೊಡನೆ ಓದಿಕೊಂಡಂತೆ ಪ್ರಕರಣ 311 ರಲ್ಲಿ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಈ ಕೆಳಕಂಡ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಮಹಿಳೆಯರ ಮತ್ತು ಮಕ್ಕಳ ರಕ್ಷಣೆಯ ಕಾವಲು ಸಮಿತಿ) ನಿಯಮಗಳು, 2020ರ ಕರಡನ್ನು ದಿನಾಂಕ:17-09-2020 ರ ಕರ್ನಾಟಕ ರಾಜ್ಯ ಪತ್ರದ ಭಾಗ-IV-A ರಲ್ಲಿ ಪ್ರಕಟಿಸಿ, ಅದರಿಂದ ಬಾಧಿತರಾಗುವ ವ್ಯಕ್ತಿಗಳಿಂದ ಸದರಿ ಕರಡಿಗೆ ಆಕ್ಷೇಪಣೆ ಮತ್ತು ಸಲಹೆಗಳನ್ನು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟವಾದ ದಿನಾಂಕದಿಂದ ಮೂವತ್ತು ದಿನಗಳೊಳಗಾಗಿ ಸಲ್ಲಿಸಬೇಕೆಂದು ಕೋರಿರುವುದರಿಂದ;

ಮತ್ತು ಸದರಿ ರಾಜ್ಯ ಪತ್ರವು ಸಾರ್ವಜನಿಕರಿಗೆ ದಿನಾಂಕ:17-09-2020 ರಂದು ಲಭ್ಯವಾಗುವಂತೆ ಮಾಡಿರುವುದರಿಂದ;

ಮತ್ತು, ಸದರಿ ಕರಡಿನ ಸಂಬಂಧದಲ್ಲಿ ರಾಜ್ಯ ಸರ್ಕಾರಕ್ಕೆ ಯಾವುದೇ ಆಕ್ಷೇಪಣೆ ಅಥವಾ ಸಲಹೆಗಳು ಬಾರದಿರುವುದರಿಂದ;

ಈಗ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 (1993ರ ಕರ್ನಾಟಕ ಅಧಿನಿಯಮ ಸಂಖ್ಯೆ 14)ರ 311 ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕರ್ನಾಟಕ ಸರ್ಕಾರವು ಈ ಮೂಲಕ ನಿಯಮಗಳನ್ನು ರಚಿಸುತ್ತದೆ, ಎಂದರೆ;-

## ನಿಯಮಗಳು

## ಅಧ್ಯಾಯ-1

**1. ಹೆಸರು ಮತ್ತು ಪ್ರಾರಂಭ.-** (1)ಈ ನಿಯಮಗಳನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಮಹಿಳೆಯರ ಮತ್ತು ಮಕ್ಕಳ ರಕ್ಷಣೆಯ ಕಾವಲು ಸಮಿತಿ) ನಿಯಮಗಳು, 2020 ಎಂದು ಕರೆಯತಕ್ಕದ್ದು.

(2) ಈ ನಿಯಮಗಳು ಕರ್ನಾಟಕ ರಾಜ್ಯಪತ್ರದಲ್ಲಿ ಅಂತಿಮವಾಗಿ ಪ್ರಕಟಿಸಿದ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**2. ಪರಿಭಾಷೆಗಳು.**-ಈ ನಿಯಮಗಳಲ್ಲಿ ವಿಷಯಕ್ಕೆ ಅಥವಾ ಸಂದರ್ಭಕ್ಕೆ ಬೇರೆ ಅರ್ಥದ ಅಗತ್ಯ ಇರದಿದ್ದರೆ,-

(i) **"ಅಧಿನಿಯಮ"** ಎಂದರೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 (1993ರ ಕರ್ನಾಟಕ ಅಧಿನಿಯಮ ಸಂಖ್ಯೆ: 14);

(ii) **"ಅಧ್ಯಕ್ಷರು"** ಎಂದರೆ ಮಹಿಳೆಯರ ಮತ್ತು ಮಕ್ಕಳ ರಕ್ಷಣೆಯ ಕಾವಲು ಸಮಿತಿಯ ಅಧ್ಯಕ್ಷರು;

(iii) **"ಆಶಾ ಕಾರ್ಯಕರ್ತೆ"** ಎಂದರೆ ಆರೋಗ್ಯ ಕಾರ್ಯಕತೆಯಾಗಿದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ನಿಯೋಜನೆಗೊಂಡ ಗ್ರಾಮ ಮಟ್ಟದಲ್ಲಿ ಮಹಿಳಾ ಮತ್ತು ಮಕ್ಕಳ ಆರೋಗ್ಯಕ್ಕೆ ಸಂಬಂಧಿಸಿದಂತೆ ಸೇವೆ ಸಲ್ಲಿಸುವವರು;

(iv) **"ಉಪಾಧ್ಯಕ್ಷರು"** ಎಂದರೆ ಮಹಿಳೆಯರ ಮತ್ತು ಮಕ್ಕಳ ರಕ್ಷಣೆಯ ಕಾವಲು ಸಮಿತಿಯ ಉಪಾಧ್ಯಕ್ಷರು;

(v) **"ಕಾಯಿದೆಯೊಡನೆ ಸಂಘರ್ಷದಲ್ಲಿರುವ ಮಗು"** : (Child in Conflict with law) ಎಂದರೆ, ಯಾವುದೇ ಮಗುವು ಅಪರಾಧವನ್ನು ಮಾಡಿದೆಯೆಂದು ದೂರಲಾದ ಅಥವಾ ಅಪರಾಧ ಮಾಡಿರುವುದು ಕಂಡುಬಂದಿದ್ದು ಅಪರಾಧ ಮಾಡಿದ ದಿನಾಂಕದಂದು ಹದಿನೆಂಟು ವರ್ಷ ವಯಸ್ಸನ್ನು ಮೀರದ ಮಗು;

(vi) **"ಜಾಡು ಪತ್ತೆ ಮಾಡು** (Track the Child Portal)" ಎಂದರೆ ಮಕ್ಕಳು ನಾಪತ್ತೆಯಾದ ಘಟನೆಗೆ ಪೂರಕವಾದ ಸರಣಿ ಕ್ರಿಯೆಗಳು / ಮಗುವಿನ ನಾಪತ್ತೆಯ ಮೂಲವನ್ನು ವಿಶ್ಲೇಷಿಸುವ ಸರಣಿ ಕ್ರಿಯೆಗಳು;

(vii) **"ಜಿಲ್ಲಾ ನ್ಯಾಯಾಲಯ"** ಎಂದರೆ ಕೌಟುಂಬಿಕ ನ್ಯಾಯಾಲಯಗಳ ಅಧಿನಿಯಮ 1984 (1984ರ ಕೇಂದ್ರ ಅಧಿನಿಯಮ ಸಂ:66)ರ ಪ್ರಕರಣ 3ರ ಮೇರೆಗೆ ಯಾವ ಪ್ರದೇಶಕ್ಕಾಗಿ ಕೌಟುಂಬಿಕ ನ್ಯಾಯಾಲಯಗಳನ್ನು ಸ್ಥಾಪಿಸಲಾಗಿದೆಯೋ ಮತ್ತು ಸಿವಿಲ್ ನ್ಯಾಯಾಲಯ ಇರುವಲ್ಲಿ ಆ ಸಿವಿಲ್ ನ್ಯಾಯಾಲಯ ಮತ್ತು ಯಾವುದೇ ಇತರ ಪ್ರದೇಶದಲ್ಲಿ ಮೂಲ ಅಧಿಕಾರ ವ್ಯಾಪ್ತಿ ಹೊಂದಿರುವ ಪ್ರಧಾನ ಸಿವಿಲ್ ನ್ಯಾಯಾಲಯ ಹಾಗೂ ರಾಜ್ಯ ಸರ್ಕಾರವು ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಈ ಅಧಿನಿಯಮದಲ್ಲಿನ ವಿಷಯಗಳಿಗೆ ಸಂಬಂದಿಸಿದಂತೆ ಅಧಿಕಾರ

ವ್ಯಾಪ್ತಿ ಹೊಂದಿರುವುದೆಂದು ನಿರ್ಧಿಷ್ಟಪಡಿಸಬಹುದಾದಂತಹ ಯಾವುದೇ ಇತರ ಸಿವಿಲ್ ನ್ಯಾಯಾಲಯವನ್ನು ಒಳಗೊಳ್ಳುತ್ತದೆ;

**(viii) "ಪ್ರಾಯ ಪೂರ್ವ"** ಎಂದರೆ 10 ರಿಂದ 18 ವರ್ಷದೊಳಗಿನ ವ್ಯಕ್ತಿ;

**(ix) "ಪೊಲೀಸ್ ಅಧಿಕಾರಿ"** ಎಂದರೆ ಗ್ರಾಮ ಪಂಚಾಯತ್ ಮಟ್ಟದ ಗ್ರಾಮಗಳಿಗೆ, ಆಯಾ ಪೊಲೀಸ್ ಠಾಣೆಯ, ಆರಕ್ಷಕ ಉಪನಿರೀಕ್ಷಕರಿಂದ ನಿಯೋಜಿಸ ಲ್ಪಡುವ ಪೊಲೀಸ್ ಅಧಿಕಾ (ಮಕ್ಕಳ ಕಲ್ಯಾಣ ಪೊಲೀಸ್ ಅಧಿಕಾರಿ);

**(x) "ಬಾಲ್ಯವಿವಾಹ"** ಎಂದರೆ ಗಂಡು ಆಗಿದ್ದರೆ 21 ವರ್ಷ ವಯಸ್ಸನ್ನು ಪೂರ್ಣಗೊಳಿಸಿರದ ಮತ್ತು ಹೆಣ್ಣು ಆಗಿದ್ದರೆ 18 ವರ್ಷ ವಯಸ್ಸನ್ನು ಪೂರ್ಣಗೊಳಿಸಿರದ ವ್ಯಕ್ತಿಗಳು ವಿವಾಹವಾದಲ್ಲಿ ಅಥವಾ ಅವರಲ್ಲಿ ಒಬ್ಬರಾದರೂ ಮೇಲ್ಕಂಡ ವಯಸ್ಸಿನ ಕೆಳಗಿದ್ದರೆ ಬಾಲ್ಯ ವಿವಾಹ ಎಂದು ಅರ್ಥ;

**(xi) "ಬಾಲ್ಯವಿವಾಹ ನಿಷೇಧ ಅಧಿಕಾರಿ"** ಎಂದರೆ ಬಾಲ್ಯವಿವಾಹ ನಿಷೇಧ ಅಧಿನಿಯಮ, 2006 (2007ರ ಕೇಂದ್ರ ಅಧಿನಿಯಮ ಸಂಖ್ಯೆ 6) 2006ರಡಿ ಬರುವ 16ನೇ ಪ್ರಕರಣದ (1)ನೇ ಉಪ ಪ್ರಕರಣದ ಮೇರೆಗೆ ನೇಮಕಗೊಂಡ ಬಾಲ್ಯವಿವಾಹ ನಿಷೇಧ ಅಧಿಕಾರಿಗಳು;

**(xii) "ಬಾಲ ನ್ಯಾಯ ಮಂಡಳಿ"** ಎಂದರೆ ಬಾಲನ್ಯಾಯ (ಮಕ್ಕಳ ಆರೈಕೆ ಮತ್ತು ಸಂರಕ್ಷಣೆ) ಅಧಿನಿಯಮ, 2015 (2016ರ ಕೇಂದ್ರ ಅಧಿನಿಯಮ 2) ರ ಪ್ರಕರಣ 4ರಡಿಯಲ್ಲಿ ರಚಿಸಿದಂತಹ ಬಾಲ ನ್ಯಾಯ ಮಂಡಳಿ;

**(ಅ) "ಜಿಲ್ಲಾ ಮಕ್ಕಳ ರಕ್ಷಣಾ ಘಟಕ"** ಎಂದರೆ ಬಾಲನ್ಯಾಯ ಅಧಿನಿಯಮದ ಪ್ರಕರಣ 106 ರಡಿಯಲ್ಲಿ ರಾಜ್ಯ ಸರ್ಕಾರದಿಂದ ಸ್ಥಾಪಿಸಲ್ಪಟ್ಟ ಈ ಅಧಿನಿಯಮದ ಉಪ ಬಂಧಗಳನ್ನು ಜಾರಿಗೆ ತರಲು ಮತ್ತು ಇತರ ಮಕ್ಕಳ ಸಂರಕ್ಷಣಾ ಕ್ರಮಗಳನ್ನು ಜಿಲ್ಲಾ ಕೇಂದ್ರಗಳಲ್ಲಿ ಖಾತ್ರಿಪಡಿಸುವಂತಹ ಘಟಕ;

**(ಆ)"ಅನಾಥ ಮಗು"** ಎಂದರೆ ಹೆತ್ತ ತಂದೆ ತಾಯಿಯಾಗಲಿ ಅಥವಾ ದತ್ತಕದ ತಂದೆ ತಾಯಿಯಾಗಲಿ ಅಥವಾ ಪೋಷಕರಾಗಲಿ ಇಲ್ಲದಂತಹ ಮತ್ತು ಕಾನೂನಾತ್ಮಕ ಪೋಷಕರು ಪಾಲನೆ ಪೋಷಣೆ ಮಾಡಲು ಇಚ್ಛಿಸದಿದ್ದಲ್ಲಿ ಅಥವಾ ಮಗುವಿನ ಪಾಲನೆ ಪೋಷಣೆ ಮಾಡಲು ಸಮರ್ಥರಿಲ್ಲದಿದ್ದಲ್ಲಿ ಅಂತಹ ಮಗು;

**(ಇ)"ಲೈಂಗಿಕ ಅತ್ಯಾಚಾರ / ಲೈಂಗಿಕ ಕಿರುಕುಳ"** ಎಂದರೆ ಲೈಂಗಿಕ ಅಪರಾಧಗಳಿಂದ ಮಕ್ಕಳ ಸಂರಕ್ಷಣೆ ಅಧಿನಿಯಮ, 2012 (2012 ರ ಕೇಂದ್ರ

ಅಧಿನಿಯಮ ಸಂಖ್ಯೆ:32)ರ ಪ್ರಕರಣ 7 ಮತ್ತು 11ರ ಪ್ರಕಾರ ನೀಡಿರುವ ಅರ್ಥವನ್ನೇ ಹೊಂದಿರತಕ್ಕದ್ದು;

(xiii) **"ಮಹಿಳಾ ಮತ್ತು ಮಕ್ಕಳ ಸಾಗಾಣಿಕೆ"** ಎಂದರೆ ಮಾಲೀಕರು, ಸಾಗಾಣಿಕೆದಾರರು ಮತ್ತು ಅಪರಾಧಿ ಜಾಲಗಳು, ಮನೆಕೆಲಸ, ಸುಳ್ಳು ಮದುವೆ, ಗುಪ್ತ ಉದ್ಯೋಗಗಳು, ಲೈಂಗಿಕ ಶೋಷಣೆ ಸುಳ್ಳು ದತ್ತುಗಳಂತಹ ಕಾನೂನು ಬಾಹಿರ ಚಟುವಟಿಕೆಗಳಿಗಾಗಿ ಮಹಿಳೆಯರನ್ನು ಮತ್ತು ಹೆಣ್ಣು ಮಕ್ಕಳನ್ನು ಶೋಚನೀಯ ಪರಿಸ್ಥಿತಿಗೆ ಬಲಾತ್ಕಾರದಿಂದ ತಳ್ಳುವುದು;

(xiv) **"ಮಗು"** ಎಂದರೆ ಪ್ರಾಪ್ತ ವಯಸ್ಕ ಅಧಿನಿಯಮ 1975 (1875 ರ ಕೇಂದ್ರ ಅಧಿನಿಯಮ ಸಂಖ್ಯೆ: 9) ಮತ್ತು 9) ಮತ್ತು ಲೈಂಗಿಕ ಅಪರಾಧಗಳಿಂದ ಮಕ್ಕಳ ರಕ್ಷಣೆ ಅಧಿನಿಯಮ, 2012 (2012ರ ಕೇಂದ್ರ ಅಧಿನಿಯಮ ಸಂಖ್ಯೆ 32) ಮೇರೆಗೆ ಹದಿನೆಂಟು ವರ್ಷ ವಯಸ್ಸನ್ನು ಮೀರದ ಯಾರೇ ವ್ಯಕ್ತಿ;

(xv) **"ಮಕ್ಕಳ ಕಲ್ಯಾಣ ಸಮಿತಿ"** ಎಂದರೆ ಬಾಲನ್ಯಾಯ (ಮಕ್ಕಳ ಆರೈಕೆ ಮತ್ತು ಸಂರಕ್ಷಣೆ) ಅಧಿನಿಯಮ 2015 (2016 ರ ಕೇಂದ್ರ ಅಧಿನಿಯಮ 2) ರ ಪ್ರಕರಣ 27ರಡಿಯಲ್ಲಿ ರಚಿಸಿದಂತಹ ಸಮಿತಿ;

(xvi) **"ಮಕ್ಕಳ ಅಭಿವೃದ್ಧಿಗೆ ಮಾರಕವಾದ ಮೂಡನಂಬಿಕೆಗಳು"** ಎಂದರೆ ಕರ್ನಾಟಕ ಅಮಾನವೀಯ ದುಷ್ಟ ಪದ್ಧತಿಗಳು ಹಾಗೂ ವಾಮಾಚಾರ ಇವುಗಳ ಪ್ರತಿಬಂಧ ಮತ್ತು ನಿರ್ಮೂಲನೆ ಅಧಿನಿಯಮ, 2012 ರಡಿಯಲ್ಲಿ ನಿಷೇಧಿಸಲ್ಪಟ್ಟಿರುವ ಮೂಢನಂಬಿಕೆಗಳು / ಕೆಟ್ಟ ನಂಬಿಕೆಗಳು, ಆಚಾರಗಳು ಮತ್ತು ಜೀವನ ಕ್ರಮಗಳು ಮತ್ತು ಮಕ್ಕಳ ಬದುಕು, ಬೆಳವಣಿಗೆ ಹಾಗೂ ಜೀವಕ್ಕೆ ಅಪಾಯಕಾರಿಯಾಗಿರುವ ಪದ್ಧತಿಗಳು;

(xvii) **"ಸದಸ್ಯರು"** ಎಂದರೆ ಸಮಿತಿಯ ಸದಸ್ಯರು;

(xviii) **"ಸಭೆ"** ಎಂದರೆ ಮಹಿಳೆಯರ ಮತ್ತು ಮಕ್ಕಳ ರಕ್ಷಣೆಯ ಕಾವಲು ಸಮಿತಿಯ ಸಭೆಗಳು;

(xix) **"ಸಮಿತಿ"** ಎಂದರೆ ನಿಯಮ 3 ರಡಿಯಲ್ಲಿ ರಚಿಸಲ್ಪಟ್ಟ ಮಹಿಳೆಯರ ಮತ್ತು ಮಕ್ಕಳ ರಕ್ಷಣೆಯ ಕಾವಲು ಸಮಿತಿ;

(xx) **"ಸಾಧಾರಣ ಕೋರಂ"** ಎಂದರೆ ಹಾಜರಿದ್ದ ಸದಸ್ಯರ ಸಂಖ್ಯೆಯಲ್ಲಿ ಅರ್ಧಕ್ಕಿಂತ ಹೆಚ್ಚು ಸದಸ್ಯ ಹಾಜರಿ;

**(xxi) "ಸಂರಕ್ಷಣೆ ಮತ್ತು ಪಾಲನೆಯ ಅಗತ್ಯವುಳ್ಳ ಮಗು"** (Child in need of care and Protection) ಎಂದರೆ,-

(ಅ) ಯಾವುದೇ ನಿವಾಸ ಅಥವಾ ನೆಮ್ಮದಿಯ ನೆಲೆಯಿಲ್ಲದ ಮತ್ತು ಮೇಲ್ನೋಟಕ್ಕೆ ಜೀವನ ನಿರ್ವಹಣೆಗೆ ಯಾವುದೇ ಮಾರ್ಗವಿಲ್ಲದ; ಅಥವಾ

(ಆ) ತಾತ್ಕಾಲಿಕ ಜಾರಿಯಲ್ಲಿರುವ ಯಾವುದೇ ಕಾರ್ಮಿಕ ಅಧಿನಿಯಮಗಳ ಉಪ ಬಂದಗಳನ್ನು ಉಲ್ಲಂಘಿಸಿ ಕೆಲಸ ನಿರ್ವಹಿಸುತ್ತಿರುವ ಅಥವಾ ಭಿಕ್ಷೆ ಬೇಡುತ್ತಿರುವ ಅಥವಾ ಬೀದಿಯಲ್ಲಿ ವಾಸಿಸುತ್ತಿರುವ; ಅಥವಾ

(ಇ) ಯಾರೇ ವ್ಯಕ್ತಿಯೊಂದಿಗೆ ವಾಸಿಸುತ್ತಿರುವ (ಅಂತಹ ವ್ಯಕ್ತಿಯು ಮಗುವಿನ ಪೋಷಕನಾಗಿರಬಹುದು ಅಥವಾ ಅಲ್ಲದಿರಬಹುದು) ಮತ್ತು ಅಂತಹ ವ್ಯಕ್ತಿಯು ಮಗುವನ್ನು ಘಾಸಿಗೊಳಿಸಿ, ಶೋಷಣೆ ಮಾಡಿ, ಹಿಂಸಿಸಿ ಅಥವಾ ಉದಾಸಿನ ಮಾಡಿ ಮಗುವಿನ ಸಂರಕ್ಷಣೆಗಾಗಿ ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾಯಿದೆಯನ್ನು ಉಲಂಘಿಸಿದ ಪ್ರಕರಣದಲ್ಲಿರುವಂತಹ ಮಗು.

**3. ಮಕ್ಕಳ ಕಲ್ಯಾಣ ಸಮಿತಿಯ ರಚನೆ.-** (1) ಈ ಸಮಿತಿಯು ಈ ಕೆಳಕಂಡ ಸದಸ್ಯರನ್ನು ಒಳಗೊಂಡಿರತಕ್ಕದ್ದು.

| ಕ್ರ ಸಂ | ಸದಸ್ಯರು | ಪದನಾಮ |
|---|---|---|
| (1) | ಗ್ರಾಮ ಪಂಚಾಯತ್ ಅಧ್ಯಕ್ಷರು (ಸಮಿತಿಯ ಅಧ್ಯಕ್ಷರು ಕಡ್ಡಾಯವಾಗಿ ಮಹಿಳೆಯಾಗಿರಬೇಕು. ಗ್ರಾಮ ಪಂಚಾಯತ್ ಅಧ್ಯಕ್ಷರು ಪುರುಷರಾಗಿದ್ದಲ್ಲಿ ಉಪಾಧ್ಯಕ್ಷರು. ಉಪಾಧ್ಯಕ್ಷರು ಪುರುಷರಾಗಿದ್ದಲ್ಲಿ, ಗ್ರಾಮ ಪಂಚಾಯತ್ ಆಯ್ಕೆ ಮಾಡಿದ ಇತರ ಮಹಿಳಾ ಸದಸ್ಯರು). | ಅಧ್ಯಕ್ಷರು |
| (2) | ಗ್ರಾಮ ಪಂಚಾಯತ್ ಉಪಾಧ್ಯಕ್ಷರು (ಸಮಿತಿಯ ಉಪಾಧ್ಯಕ್ಷರು ಕಡ್ಡಾಯವಾಗಿ ಮಹಿಳೆಯಾಗಿರಬೇಕು. ಗ್ರಾಮ ಪಂಚಾಯತ್ ಉಪಾಧ್ಯಕ್ಷರು ಪುರುಷರಾಗಿದ್ದಲ್ಲಿ, ಗ್ರಾಮ ಪಂಚಾಯತ್ ಆಯ್ಕೆ ಮಾಡಿದ ಇತರ ಮಹಿಳಾ ಸದಸ್ಯರು) | ಉಪಾಧ್ಯಕ್ಷರು |
| (3) | ಗ್ರಾಮ ಪಂಚಾಯಿತಿಯು ಆಯ್ಕೆ ಮಾಡಿದ ಇಬ್ಬರು ಸದಸ್ಯರು (ಇವರಲ್ಲಿ ಒಬ್ಬರು ಮಹಿಳಾ ಸದಸ್ಯರು ಆಗಿರತಕ್ಕದ್ದು) | ಸದಸ್ಯರು |
| (4) | ಗ್ರಾಮ ಪಂಚಾಯಿತಿ ವ್ಯಾಪ್ತಿಯ ಒಬ್ಬರು ಪ್ರಾಥಮಿಕ ಶಾಲೆ ಹಾಗೂ ಒಬ್ಬರು ಪ್ರೌಢಶಾಲೆಯ ಮುಖ್ಯೋಪಾಧ್ಯಾಯರು (ತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳು ಆಯ್ಕೆ ಮಾಡುವುದು) | ಸದಸ್ಯರು |
| (5) | ಗ್ರಾಮ ಪಂಚಾಯಿತಿ ವ್ಯಾಪ್ತಿಯ ಒಬ್ಬರು ಗ್ರಾಮ ಲೆಕ್ಕಿಗರು (ತಹಶೀಲ್ದಾರರು ನೇಮಿಸುವುದು) | ಸದಸ್ಯರು |

| | | |
|---|---|---|
| (6) | ಗ್ರಾಮ ಪಂಚಾಯಿತಿ ವ್ಯಾಪ್ತಿಯ ಎಲ್‌ಎಚ್‌ವಿ/ ಎಎನ್‌ಎಂ ಮತ್ತು ಆಶಾ ಕಾರ್ಯಕರ್ತೆಯರಲ್ಲಿ ಒಬ್ಬರು (ತಾಲ್ಲೂಕು ವೈದ್ಯಾಧಿಕಾರಿಗಳು ನಾಮ ನಿರ್ದೇಶನ ಮಾಡುವುದು) | ಸದಸ್ಯರು |
| (7) | ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬೀಟ್ ಪೊಲೀಸ್ ಅಧಿಕಾರಿ (ವೃತ್ತ ನಿರೀಕ್ಷಕರು ನಿಯೋಜಿಸುವುದು) | ಸದಸ್ಯರು |
| (8) | ಗ್ರಾಮ ಪಂಚಾಯಿತಿ ವ್ಯಾಪ್ತಿಯ ಐಸಿಡಿಎಸ್ (ಸಮಗ್ರ ಶಿಶು ಅಭಿವೃದ್ಧಿ ಯೋಜನೆಯ) ಮೇಲ್ವಿಚಾರಕಿ (ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ನೇಮಿಸುವುದು) | ಸದಸ್ಯರು |
| (9) | ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಒಬ್ಬರು ಸ್ವಯಂ ಸೇವಾ ಸಂಸ್ಥೆಯ ಮಹಿಳಾ ಪ್ರತಿನಿಧಿ, ಸ್ತ್ರೀ ಶಕ್ತಿ ಸ್ವ-ಸಹಾಯ ಸಂಘಗಳ ಪ್ರತಿನಿಧಿ, (ಗ್ರಾಮ ಪಂಚಾಯಿತಿಯು ನಾಮ ನಿರ್ದೇಶನ ಮಾಡುವುದು) | ಸದಸ್ಯರು |
| (10) | ಗ್ರಾಮ ಪಂಚಾಯಿತಿ ವ್ಯಾಪ್ತಿಯ ಪ್ರೌಢಶಾಲೆಯಲ್ಲಿ ಓದುತ್ತಿರುವ ಒಬ್ಬ ವಿದ್ಯಾರ್ಥಿ ಮತ್ತು ಒಬ್ಬಳು ವಿದ್ಯಾರ್ಥಿನಿ (ಇವರನ್ನು ಸಂಬಂಧಪಟ್ಟ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರು ಸೂಚಿಸುವುದು) | ಸದಸ್ಯರು |
| (11) | ಗ್ರಾಮ ಪಂಚಾಯಿತಿ ವ್ಯಾಪ್ತಿಯ ಒಬ್ಬ ಅಂಗನವಾಡಿ ಕಾರ್ಯಕರ್ತೆ (ಇವರನ್ನು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ನೇಮಿಸುವುದು) | ಸದಸ್ಯರು |
| (12) | ಸಂಬಂಧಪಟ್ಟ ಗ್ರಾಮ ಪಂಚಾಯತಿಯ ಪಂಚಾಯತ್ ಅಭಿವೃದ್ಧಿ ಅಧಿಕಾರಿ / ಪಂಚಾಯತಿ ಕಾರ್ಯದರ್ಶಿ ಗ್ರೇಡ್-1. | ಸದಸ್ಯ ಕಾರ್ಯದರ್ಶಿ |

(2) ಅಧ್ಯಕ್ಷರು ಮತ್ತು ಉಪಾಧ್ಯಕ್ಷರು ಗ್ರಾಮ ಪಂಚಾಯತಿಯಲ್ಲಿ ಅವರುಗಳ ಸದಸ್ಯತ್ವ/ಪದಾಧಿಕಾರಿ ಹುದ್ದೆ ನಿಂತುಹೋಗುವವರೆಗೆ ಅಥವಾ ರದ್ದಾಗುವವರೆಗೆ ಇವೆರಡರಲ್ಲಿ ಯಾವುದು ಮೊದಲೋ, ಅಲ್ಲಿಯವರೆಗೆ ಅಧಿಕಾರವನ್ನು ಹೊಂದಿರತಕ್ಕದ್ದು.

(3) ಇತರ ನಾಮ ನಿರ್ದೇಶಿತ ಸದಸ್ಯರು ಎರಡು ವರ್ಷ ಅವಧಿ ಹೊಂದಿರತಕ್ಕದ್ದು.

(4) ಸಮಿತಿಯು ಎರಡು ತಿಂಗಳಿಗೊಮ್ಮೆ ಅಥವಾ ಅಗತ್ಯವಿದ್ದಾಗ ಅದಕ್ಕೂ ಮೊದಲೆ ಸಭೆ ಸೇರುವುದು.

**4. ಸಮಿತಿಯ ಜವಾಬ್ದಾರಿಗಳು.-** (1) ಗ್ರಾಮ ಪಂಚಾಯ್ತಿ ಮಟ್ಟದಲ್ಲಿ 18 ವರ್ಷದೊಳಗಿನ ಹೆಣ್ಣು ಮಕ್ಕಳು ಮತ್ತು 21 ವರ್ಷದೊಳಗಿನ ಗಂಡು ಮಕ್ಕಳ ಮಾಹಿತಿ

ಇಡಬೇಕು ಹಾಗೂ ಶಾಲೆಯಿಂದ ಹೊರಗುಳಿದಿರುವ ಮಕ್ಕಳ ಅಂಕಿ ಸಂಖ್ಯೆಗಳನ್ನು ದಾಖಲಿಸಿಕೊಂಡಿರಬೇಕು.

(2) ಪಂಚಾಯತಿ ಕಛೇರಿ, ಶಾಲೆ, ಪೊಲೀಸ್, ಅಂಗನವಾಡಿ ಮಹಿಳಾ ಸ್ವಸಹಾಯ ಸಂಘಗಳು, ಯುವ ಸಂಘಟನೆಗಳು ಮಕ್ಕಳ ಆರೋಗ್ಯ, ಶೈಕ್ಷಣಿಕ ಮಟ್ಟ ಹಾಗೂ ಕ್ರಿಡಾ ಚಟುವಟಿಕೆಗಳ ಮತ್ತು ಕೌಟುಂಬಿಕ ಹಿನ್ನೆಲೆಗಳ ಬಗ್ಗೆ ಪರಸ್ಪರ ವಿಚಾರ ವಿನಿಮಯ ಮಾಡಿಕೊಳ್ಳುವುದು.

(3) ಅನೈತಿಕ ಸಾಗಾಣಿಕೆಗೆ ಒಳಗಾದ ಮಹಿಳೆಯರಿಗೆ ಮತ್ತು ಮಕ್ಕಳಿಗೆ ರಕ್ಷಣೆ ನೀಡುವುದು ಮತ್ತು ಅವರಿಗೆ ಹಾಗೂ ಅವರ ಕುಟುಂಬಗಳಿಗೆ ಆರ್ಥಿಕ, ನೈತಿಕ, ಸಾಮಾಜಿಕ, ವೈದ್ಯಕೀಯ ಹಾಗೂ ಶೈಕ್ಷಣಿಕ ನೆರವು ದೊರೆಯುವಂತೆ ಮಾಡುವುದು.

(4) ಸಮುದಾಯದ ಎಲ್ಲರ ಭಾಗವಹಿಸುವಿಕೆಯೊಂದಿಗೆ ಮಹಿಳೆಯರು ಮತ್ತು ಮಕ್ಕಳ ಅನೈತಿಕ ಸಾಗಾಣಿಕೆಯನ್ನು ನಿಷೇಧಿಸುವ ಹಾಗೂ ಇಂಥಹ ಚಟುವಟಿಕೆಯ ಮೇಲೆ ನಿಗಾ ವಹಿಸುವುದು.

(5) ಮಹಿಳೆಯರ ಮತ್ತು ಮಕ್ಕಳ ಸಾಗಾಣಿಕೆ ತಡೆಯಲು ಗ್ರಾಮ ಮಟ್ಟದಲ್ಲಿ ಅರಿವು ಮೂಡಿಸಲು ಕಾರ್ಯಕ್ರಮ ಹಮ್ಮಿಕೊಳ್ಳುವುದು. ಸಾಗಾಣಿಕೆ ತಡೆಯಲು ಪ್ರಚಾರಕ್ಕಾಗಿ ಮಾಹಿತಿ ಸಂಗ್ರಹಿಸಿ, ಉತ್ತಮವಾದ ಸಾಮಾಜಿಕ ವ್ಯವಸ್ಥೆಗಾಗಿ ಬೇಕಾದ ಸಂಪನ್ಮೂಲಗಳ ಕ್ರೋಢಿಕರಣಗೊಳಿಸುವುದು.

(6) ಮಹಿಳೆಯರು ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ವಿರುದ್ಧ ಶಾಲೆಗಳಲ್ಲಿ ಮಕ್ಕಳಿಗೆ ಅರಿವು ಮತ್ತು ಜಾಗೃತಿ ಮೂಡಿಸುವುದು.

(7) ಗ್ರಾಮಗಳಲ್ಲಿ ಮತ್ತು ಶಾಲೆಗಳ ಬಳಿ ಅನುಮಾನಸ್ಪದವಾಗಿ ಸಂಚರಿಸುವ ಹೊಸ ವ್ಯಕ್ತಿಗಳ ಬಗ್ಗೆ ಸಮಿತಿಯ ಸದಸ್ಯರು ನಿಗಾ ವಹಿಸುವುದು. ಅನುಮಾನ ಖಾತರಿಗೊಂಡಲ್ಲಿ ಸ್ಥಳೀಯ ಪೊಲೀಸರಿಗೆ ದೂರು ದಾಖಲಿಸುವುದು.

(8) ಗ್ರಾಮದಿಂದ ಕಾಣೆಯಾದ ಮಹಿಳೆಯರ ಮತ್ತು ಮಕ್ಕಳ ದಾಖಲೆ ಇಡುವುದು.

(9) ವಲಸೆ ಹೋದ ಕುಟುಂಬದವರ ಮಾಹಿತಿ ಇಡುವುದು ಮತ್ತು ಈ ಕುಟುಂಬದವರು ವಲಸೆ ಹೋಗಿರುವ ಪ್ರದೇಶದಲ್ಲಿ ಕುಟುಂಬ ನಿರ್ವಹಣೆಗಾಗಿ ಅನುಸರಿಸುತ್ತಿರುವ ಜೀವನ ಬಗ್ಗೆ ಲಭ್ಯ ಮಾಹಿತಿಗಳನ್ನು ಅವರ ಪರಿಚಯಸ್ಥರಿಂದ ಪಡೆದುಕೊಳ್ಳುತ್ತಿರಬೇಕು. ಅವರುಗಳು ಹಿಂತಿರುಗಿದ ನಂತರ ಅವರೊಂದಿಗೆ ಇದ್ದ ಸದಸ್ಯರುಗಳೆಲ್ಲರೂ ಹಿಂತಿರುಗಿರುವ ಬಗ್ಗೆ ಖಾತರಿಪಡಿಸಿಕೊಳ್ಳುವುದು.

(10) ಬಾಲ್ಯವಿವಾಹದಿಂದ ಉಂಟಾಗುವ ದುಷ್ಪರಿಣಾಮಗಳ ಮತ್ತು ಬಾಲ್ಯವಿವಾಹ ನಿಷೇಧದ ಕಾನೂನಿನ ಬಗ್ಗೆ ವ್ಯಾಪಕ ಪ್ರಚಾರ ಕೈಗೊಳ್ಳುವುದು.

(11) ಗ್ರಾಮದಲ್ಲಿ ಯಾವುದೇ ಬಾಲ್ಯವಿವಾಹ ನಡೆಯುತ್ತಿರುವುದು ಕಂಡುಬಂದಲ್ಲಿ ಕೂಡಲೇ ಸಂಬಂಧಪಟ್ಟ ಬಾಲ್ಯವಿವಾಹ ನಿಷೇಧಾಧಿಕಾರಿಗಳ ಗಮನಕ್ಕೆ ತಂದು ಪೊಲೀಸ್ ಠಾಣೆಯಲ್ಲಿ ಎಫ್ಐಆರ್ ದಾಖಲಿಸುವ ಪ್ರಕ್ರಿಯೆ ಒಳಗೊಂಡಂತೆ ಅಗತ್ಯವಾದ ಎಲ್ಲಾ ಕ್ರಮಗಳನ್ನು ಕೈಗೊಳ್ಳುವುದು.

(12) ಬೇಸಿಗೆ ರಜೆ ಅವಧಿ ಮುಗಿದ ನಂತರ ಶಾಲೆಗೆ ದಾಖಲಾದ/ದಾಖಲಾಗಬೇಕಾದ ಮಕ್ಕಳ ಸಮೀಕ್ಷೆ ನಡೆಸುವುದು.

(13) ಸಾರ್ವಜನಿಕ ಶಿಕ್ಷಣ ಇಲಾಖೆಯೊಂದಿಗೆ ಸಹಕರಿಸಿ ಶಾಲೆಯಿಂದ ಹೊರಗುಳಿದ ಮಕ್ಕಳ ಪೋಷಕರ ಮನವೊಲಿಸಿ, ಶಾಲೆಗೆ ಮರಳಿ ದಾಖಲಾಗುವ ಬಗ್ಗೆ ಕ್ರಮ ವಹಿಸುವುದು.

(14) ಗ್ರಾಮ ಸಭೆಗಳಲ್ಲಿ ಮಕ್ಕಳ ವಿದ್ಯಾಭ್ಯಾಸದ ಮಹತ್ವ ಮತ್ತು ವಿವಿಧ ಇಲಾಖೆಗಳಿಂದ ಸಿಗುವ ಸೌಲಭ್ಯ ಮುಂತಾದವುಗಳನ್ನು ಸಾರ್ವಜನಿಕರ ಗಮನಕ್ಕೆ ತರುವುದು.

(15) ಶಾಲೆಯಿಂದ ಹೊರಗುಳಿದ ಪ್ರಾಯಪೂರ್ವ ಮಕ್ಕಳಿಗೆ ವಿವಿಧ ರೀತಿಯ ಕೌಶಲ್ಯ ತರಬೇತಿಯನ್ನು ನೀಡಲು ಕ್ರಮವಹಿಸುವುದು.

(16) ಉತ್ತಮ ಅಂಕಗಳನ್ನು ಪಡೆದ ಮಕ್ಕಳನ್ನು ಗ್ರಾಮ ಸಭೆಗಳಲ್ಲಿ ಗುರುತಿಸಿ ಗ್ರಾಮ ಪಂಚಾಯತಿಯಿಂದ ಬಹುಮಾನ ಕೊಡುವ ಮೂಲಕ ಪ್ರೋತ್ಸಾಹಿಸುವುದು.

(17) ಹೆಣ್ಣುಮಕ್ಕಳ ದಾಖಲಾತಿ ಹೆಚ್ಚಿರುವ ಶಾಲೆಗಳನ್ನು ಗುರುತಿಸಿ, ಗ್ರಾಮ ಸಭೆಗಳಲ್ಲಿ ಸನ್ಮಾನಿಸುವುದು.

(18) ಗ್ರಾಮ ಸಭೆಗಳ ಮೂಲಕ ಉತ್ತಮ ಶಿಕ್ಷಣ ತಜ್ಞರಿಂದ ವಿದ್ಯಾಭ್ಯಾಸದ ಮಹತ್ವದ ಕುರಿತು ಮಕ್ಕಳಿಗೆ ಮತ್ತು ಪೋಷಕರಿಗೆ ಅರಿವು ಮೂಡಿಸುವುದು.

(19) 7ನೇ ತರಗತಿಯಿಂದ 8ನೇ ತರಗತಿ ಮತು 10ನೇ ತರಗತಿಯಿಂದ ಪಿಯುಸಿ ತರಗತಿಗಳಿಗೆ ಮಕ್ಕಳು ದಾಖಲಾಗುವಂತೆ ಸಮಿತಿಯ ಸದಸ್ಯರು ಖಚಿತಪಡಿಸಿಕೊಳ್ಳುವುದು.

(20) ಪಂಚಾಯತ್ ವ್ಯಾಪ್ತಿಯಲ್ಲಿ ಸರಕಾರಿ ಸೌಲಭ್ಯಗಳನ್ನು ನೀಡುವಾಗ ಫಲಾನುಭವಿಗಳಿಂದ ಅವರ ಕುಟುಂಬಗಳಲ್ಲಿ ಬಾಲ ಕಾರ್ಮಿಕದಂತಹ ಅನಿಷ್ಠ ಪದ್ಧತಿಯನ್ನು ಅನುಸರಿಸುವುದಿಲ್ಲವೆಂದು ಕರಾರು ಪತ್ರ ಬರೆಯಿಸಿಕೊಳ್ಳುವುದು.

(21) ಮಕ್ಕಳನ್ನು ದುಡಿಸುವ ಮಾಲೀಕರುಗಳಿಗೆ ಮತ್ತು ಅವರಿಗೆ ಸಹಕರಿಸುವವರ ವಿರುದ್ಧ ಕ್ರಮ ಜರುಗಿಸಲು ಸಂಬಂಧಪಟ್ಟ ಇಲಾಖೆಗೆ ಹಾಗೂ ಸ್ಥಳೀಯ ಪೊಲೀಸ್ ಠಾಣೆಗೆ ಮಾಹಿತಿ ನೀಡುವುದು.

(22) ಗ್ರಾಮ ಪಂಚಾಯತ್ ವ್ಯಾಪ್ತಿಯ 18 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಗುಣಮಟ್ಟದ ಶಿಕ್ಷಣವನ್ನು ನೀಡಲು ಸಮುದಾಯದ, ವಿವಿಧ ಇಲಾಖೆಗಳ, ಸ್ಥಳೀಯ ನಾಗರಿಕ ಸಂಘ ಸಂಸ್ಥೆಗಳಿಂದ ಅಗತ್ಯ ನೆರವನ್ನು ಪಡೆದುಕೊಳ್ಳುವುದು. ಪ್ರತಿಭಾವಂತ ಬಡ ವಿದ್ಯಾರ್ಥಿಗಳನ್ನು ಗುರುತಿಸಿ, ಅವರುಗಳ ಹೆಚ್ಚಿನ ವಿದ್ಯಾಭ್ಯಾಕ್ಕೆ ಅನುವಾಗುವಂತೆ ವಿವಿಧ ರೀತಿಯ ಸಹಾಯಗಳನ್ನು ಸಂಘ ಸಂಸ್ಥೆಗಳಿಂದ, ಸ್ಥಳೀಯ ಕೈಗಾರಿಕೋದ್ಯಮಿಗಳಿಂದ ಪಡೆದುಕೊಳ್ಳಲು ಪ್ರಯತ್ನಿಸುವು .

(23) ಗ್ರಾಮ ಪಂಚಾಯತ್ ಮಟ್ಟದಲ್ಲಿ ರೈತರು / ಕಾರ್ಮಿಕರು ಹೊಲ, ಗದ್ದೆ, ಜೀತ ಸಂಬಳಕ್ಕೆ 18 ವರ್ಷದೊಳಗಿನ ಮಕ್ಕಳನ್ನು ದುಡಿಸದಂತೆ ಹಾಗೂ ದನ, ಕುರಿ, ಎಮ್ಮೆ ಮೇಯಿಸಲು ಮಕ್ಕಳನ್ನು ಬಳಸದಂತೆ ನಿರಂತರ ನಿಗಾವಹಿಸಿ 18 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ನಿರಂತರ ಶಿಕ್ಷಣ ದೊರೆಯುವಂತೆ ಕ್ರಮ ಕೈಗೊಳ್ಳುವುದು.

(24) ವಿಕೃತ ಮೂಢನಂಬಿಕೆಗಳಿಗೆ ಮತ್ತು ಇತರೆ ಕಂದಾಚಾರಗಳಿಗೆ 18 ವರ್ಷದೊಳಗಿನ ಮಕ್ಕಳು ಬಲಿಯಾಗದಂತೆ ರಕ್ಷಣೆ ನೀಡುವುದು ಹಾಗೂ ಈ ಕುರಿತು ಸಮುದಾಯದಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು.

(25) ಪೋಷಕರಿಗೆ ಬೇಡವಾದ ಮಕ್ಕಳು ಮತ್ತು ರಸ್ತೆಯಲ್ಲಿ ಅನಾಥವಾಗಿ ಕಂಡು ಬಂದ ಮಕ್ಕಳನ್ನು ಗುರುತಿಸಿ, ಮಾಹಿತಿಯನ್ನು ಮಕ್ಕಳ ಕಲ್ಯಾಣ ಸಮಿತಿಗೆ ನೀಡುವುದು. ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಕುಟುಂಬಗಳಲ್ಲಿ ರಕ್ಷಣೆಯಿಲ್ಲದೇ, ಒಬ್ಬಂಟಿಯಾಗಿರುವ ಹೆಣ್ಣು ಮಕ್ಕಳನ್ನು ಗುರುತಿಸುವುದು ಹಾಗೂ ಪೋಷಕರುಗಳ ದುಶ್ಚಟದಿಂದಾಗಿ ರಕ್ಷಣೆ ಇಲ್ಲದ ಮಕ್ಕಳನ್ನು ಗುರುತಿಸಿ ಅಂಥಹ ಕುಟುಂಬದ ಮಕ್ಕಳ ವಿವರ ಮತ್ತು ಮಾಹಿತಿಯನ್ನು ಜಿಲ್ಲಾ ಮಕ್ಕಳ ರಕ್ಷಣಾ ಘಟಕಕ್ಕೆ ತಿಳಿಸುವುದು. ಸಂಕಷ್ಟದಲ್ಲಿರುವ ಮಹಿಳೆ/ಹೆಣ್ಣು ಮಕ್ಕಳು ಗರ್ಭಿಣಿಯಾದಾಗ ಅವರನ್ನು ನಿರಂತರವಾಗಿ ಅನುಸರಣೆ ಮಾಡುವುದು ಹಾಗೂ ಮಕ್ಕಳ ಪೋಷಣೆಯ ಬಗ್ಗೆ ಜಿಲ್ಲಾ ಮಕ್ಕಳ ರಕ್ಷಣಾ ಘಟಕಕ್ಕೆ ತಿಳಿಸುವುದು.

(26) ಮಕ್ಕಳಿಗೆ ಸಂಬಂಧಿಸಿದ ಎಲ್ಲಾ ವಿಷಯಗಳನ್ನು ಪರಿಶೀಲಿಸಿ, ಅವುಗಳಲ್ಲಿನ ಸಮಸ್ಯೆಗಳನ್ನು  ಗುರುತಿಸಿ ಪರಿಹರಿಸಲು ನೆರವಾಗುವುದು.

(27) ಲೈಂಗಿಕ ದೌರ್ಜನ್ಯಕ್ಕೊಳಗಾದ ಮಕ್ಕಳು ಕಂಡುಬಂದಲ್ಲಿ, ಮಗುವಿಗೆ ರಕ್ಷಣೆ ನೀಡಿ ತಕ್ಷಣ ಮಕ್ಕಳ ಕಲ್ಯಾಣ ಸಮಿತಿ ಮುಂದೆ ಹಾಜರುಪಡಿಸುವುದು.

(28) ಕಡ್ಡಾಯವಾಗಿ ಮಕ್ಕಳ ಗ್ರಾಮ ಸಭೆ ನಡೆಸಲು ಮತ್ತು ಸದರಿ ಸಭೆಯಲ್ಲಿ ಚರ್ಚಿಸಿದ ಅಂಶಗಳ ಬಗ್ಗೆ ಕ್ರಮ ಕೈಗೊಳ್ಳುವುದು.

(29) ಮಕ್ಕಳಿಗೆ ಸಂಬಂಧಿಸಿದ ಸೂಕ್ತ ಯೋಜನೆಗಳಲ್ಲಿ ಅವಶ್ಯಕವಾದ ಸೌಲಭ್ಯ ಪರಿಹಾರ, ಪುನರ್ವಸತಿ ಮತ್ತು ಪರ್ಯಾಯ ವ್ಯವಸ್ಥೆಗಳನ್ನು ಆಯಾ ಇಲಾಖೆಗಳ ಅನುಸಾರವಾಗಿ ಮಕ್ಕಳಿಗೆ / ಕುಟುಂಬಗಳಿಗೆ ಒದಗಿಸುವುದು.

(30) ಗ್ರಾಮ ಪಂಚಾಯಿತಿಯ ಪ್ರತಿ ಶಾಲೆಗಳಲ್ಲಿ ಮಕ್ಕಳ ಹಕ್ಕುಗಳ ಕ್ಲಬ್/ಮೀನಾ ತಂಡ (ಬಾಲಕಿಯರ ಗುಂಪು) ಮಕ್ಕಳ ಸುರಕ್ಷಾ ಸಮಿತಿಗಳ ಕಾರ್ಯ ವೈಖರಿಯ ಬಗ್ಗೆ ಮೇಲ್ವಿಚಾರಣೆ ಮಾಡುವುದು ಮತ್ತು ಹೆಣ್ಣು ಮಕ್ಕಳಿಗೆ ಪ್ರತ್ಯೇಕ ಶೌಚಾಲಯ, ವಿಕಲಚೇತನ ಮಕ್ಕಳಿಗೆ ಅನುವಾಗುವ ಶೌಚಾಲಯ ಹಾಗೂ ಇತರೆ ಮೂಲಭೂತ ಸೌಕರ್ಯಗಳು ಲಭ್ಯವಾಗುವಂತೆ ನೋಡಿಕೊಳ್ಳುವುದು.

**5. ಅಧಿಕೃತ ಸಂವಹನ ಮತ್ತು ಒಪ್ಪಂದಗಳು.-** (1) ಸದಸ್ಯ ಕಾರ್ಯದರ್ಶಿಯು ಸಮಿತಿಯ ಪೂರ್ವಾನುಮೋದನೆಯನ್ನು ಪಡೆದು ನಿಯಮ 4ರಲ್ಲಿ ನಿರ್ದಿಷ್ಟ ಪಡಿಸದ ಯಾವುದೇ ಪ್ರಕಾರ್ಯಗಳನ್ನು ನಿರ್ವಹಿಸಲು ಸಮಿತಿಯ ಪರವಾಗಿ ಲಿಖಿತ ಒಪ್ಪಂದಗಳನ್ನು ಮಾಡಿಕೊಳ್ಳತಕ್ಕದ್ದು.

(2)ಸಮಿತಿಯ ಎಲ್ಲಾ ಅಧಿಕೃತ ಪತ್ರಗಳಿಗೆ ಸದಸ್ಯ ಕಾರ್ಯದರ್ಶಿಯು ಸಹಿ ಮಾಡತಕ್ಕದ್ದು.

**6 ಆರ್ಥಿಕ ವ್ಯವಹಾರಗಳ ನಿರ್ವಹಣೆ .-** (1) ಮಹಿಳೆಯರು ಮತ್ತು  ಮಕ್ಕಳ ರಕ್ಷಣೆಯ ಕಾವಲು ಸಮಿತಿಯು ಮಕ್ಕಳ ಸಾಗಾಣಿಕೆ ತಡೆಗಟ್ಟುವಿಕೆ ಅಧಿನಿಯಮ ಹಾಗೂ ಬಾಲ್ಯವಿವಾಹ ನಿಷೇಧ ಅಧಿನಿಯಮ ಮತ್ತು ಸಮಗ್ರ ಮಕ್ಕಳ ರಕ್ಷಣಾ ಯೋಜನೆಯ ಅಧಿನಿಯಮದಡಿ ಬಿಡುಗಡೆಯಾಗುವ ಅನುದಾನವನ್ನು ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) ನಿಯಮಗಳು 2006ರ ಅನುಸಾರ ವೆಚ್ಚ ಮಾಡುವುದು. ಗ್ರಾಮ ಮಟ್ಟದ ಸಮಿತಿಯ ಅಧಕ್ಷರು ಮತ್ತು ಸದಸ್ಯ ಕಾರ್ಯದರ್ಶಿಯವರ ಹೆಸರಿನಲ್ಲಿ ರಾಷ್ಟ್ರೀಕೃತ / ಷೆಡ್ಯೂಲ್ಡ್ ಬ್ಯಾಂಕ್‌ಗಳಲ್ಲಿ ಜಂಟಿ ಖಾತೆಯನ್ನು ತೆರೆದು ಹಣಕಾಸಿನ ವ್ಯವಹಾರ ನಿರ್ವಹಿಸುವುದು.

(2) ಜಂಟಿ ಖಾತೆಗೆ ಬಿಡುಗಡೆ ಮಾಡಲಾದ ಅನುದಾನದಲ್ಲಿ ವೆಚ್ಚ ಭರಿಸಿದ ಬಗ್ಗೆ ಲೆಕ್ಕ ಪತ್ರಗಳನ್ನು ಸಮಿತಿಯ ಸದಸ್ಯ ಕಾರ್ಯದರ್ಶಿಯವರು ನಿರ್ವಹಿಸುವುದು. ಸಮಿತಿಯ ಸಭೆಯಲ್ಲಿ ಸದರಿ ಲೆಕ್ಕ ಪತ್ರಗಳನ್ನು ಅಧ್ಯಕ್ಷರು ದೃಢೀಕರಿಸುವುದು ಹಾಗೂ ಸಭೆಯಲ್ಲಿ ಗಮನಕ್ಕೆ ತರುವುದು.

(3) ಅಧ್ಯಕ್ಷರು ಮತ್ತು ಸದಸ್ಯರುಗಳು ಸೇವಾ ಮನೋಭಾವನೆಯಿಂದ ಸಾಮಾಜಿಕ ಕಳಕಳಿಯುಳ್ಳವರಾಗಿ ಯಾವುದೇ ಆರ್ಥಿಕ ಸೌಲಭ್ಯವನ್ನು ನಿರೀಕ್ಷಿಸದೆ ಸಭೆಗಳಲ್ಲಿ ಭಾಗವಹಿಸಬೇಕು ಮತ್ತು ಅವರುಗಳ ಜವಾಬ್ದಾರಿಗಳನ್ನು ನಿರ್ವಹಿಸಬೇಕು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಬಿ. ನವೀನ್ ಕುಮಾರ್)**
ಸರ್ಕಾರದ ಅಧೀನ ಕಾರ್ಯದರ್ಶಿ (ಜಿ.ಪಂ.) (ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.